2. ವಿಷಯ: ಮಹಿಳಾ ವಿಶ್ವವಿದ್ಯಾಲಯದಲ್ಲಿ ಬೋಧಕೇತರ ಸಿಬ್ಬಂದಿಯನ್ನು ನೇಮಿಸುವ ಬಗ್ಗೆ.

ಶ್ರೀ ಹೆಚ್.ಆರ್. ಅಲಗೂರು (ನಾಗಠಾಣ):– ಮಾನ್ಯ ಅಧ್ಯಕ್ಷರೆ, ರಾಜ್ಯ ಮಹಿಳಾ ವಿಶ್ವವಿದ್ಯಾಲಯದಲ್ಲಿ ವಿಶ್ವವಿದ್ಯಾಲಯದ ಅಧಿನಿಯಮ 2000ರ ಪ್ರಕರಣ 56ರ ಅಡಿಯಲ್ಲಿ 1016 ಜನ ಬೋಧಕೇತರ ಸಿಬ್ಬಂದಿಯನ್ನು ನೇಮಿಸಿರುವ ಬಗ್ಗೆ ಮಾನ್ಯ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು, ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರಾದ ಅಲಗೂರುರವರು ರಾಜ್ಯ ಮಹಿಳಾ ವಿಶ್ವವಿದ್ಯಾಲಯದಲ್ಲಿ ವಿಶ್ವವಿದ್ಯಾಲಯದ ಅಧಿನಿಯಮ 2000ರ ಪ್ರಕರಣ 56ರ ಅಡಿಯಲ್ಲಿ 1016 ಜನ ಬೋಧಕೇತರ ಸಿಬ್ಬಂದಿಯನ್ನು ನೇಮಿಸಿರುವ ಬಗ್ಗೆ ಮಾನ್ಯ ಸಚಿವರ ಗಮನ ಸೆಳೆದಿದ್ದಾರೆ. ಸರ್ಕಾರ ಇದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತದೆ.

3) ವಿಷಯ: ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ತೊಂದರೆಯನ್ನು ನೀಗಿಸಲು ವಿಶೇಷ ಪ್ಯಾಕೇಜ್‌ಅನ್ನು ಘೋಷಿಸುವ ಬಗ್ಗೆ.

ಶ್ರೀ ಪಿಳ್ಳ ಮುನಿಶಾಮಪ್ಪ (ದೇವನಹಳ್ಳಿ):– ಮಾನ್ಯ ಅಧ್ಯಕ್ಷರೆ, ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ದೇವನಹಳ್ಳಿ ಮತ್ತು ವಿಜಯಪುರ ಎರಡು ಪಟ್ಟಣಗಳಿವೆ. ಸುಮಾರು 46 ಜನ ಪುರಸಭಾ ಸದಸ್ಯರು ಬರುತ್ತಾರೆ. ಮತ್ತು ಗ್ರಾಮೀಣ ಪ್ರದೇಶದಲ್ಲಿ 306 ಹಳ್ಳಿಗಳು ಬರುತ್ತವೆ, 1995ರಲ್ಲಿ dark ಪ್ರದೇಶವೆಂದು ನಮಗೆ consider ಮಾಡಿದ ತದನಂತರದಲ್ಲಿ ನಮ್ಮ ತಾಲ್ಲೂಕಿನಲ್ಲಿ ಕುಡಿಯುವ ನೀರಿಗಾಗಿ ತೊಂದರೆಯಾಗುತ್ತಿದೆ. ಎರಡು ಪಟ್ಟಣ ಪ್ರದೇಶ ಮತ್ತು ಐದು ಹೋಬಳಿಗಳಿಗೆ ವಿಶೇಷವಾಗಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಇರುವುದರಿಂದ ಈ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಿಗೆ ಕುಡಿಯುವ ನೀರಿನ ತೊಂದರೆ ಇರುವುದರಿಂದ ಈ ಸಮಸ್ಯೆಯನ್ನು ನಿವಾರಿಸುವಂತಹ ವಿಶೇಷ